# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 445(289)
ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 07.12.2023
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಗೆ ಬರುವ ಡ್ಯಾಂಗಳು, ಕೆರೆಗಳು ಹಾಗೂ ಇವುಗಳ ವ್ಯಾಪ್ತಿಯಲ್ಲಿ ಬರುವ ನಾಲೆಗಳ ಮತ್ತು ರಸ್ತೆ ಕಾಮಗಾರಿಗೆ ಪ್ರಸ್ತುತ ಸಾಲಿನಲ್ಲಿ ಎಷ್ಟು ಅನುದಾನವನ್ನು ಒದಗಿಸಲಾಗಿದೆ; (ತಾಲ್ಲೂಕುವಾರು ಕಾಮಗಾರಿಗಳ ವಿವರ ನೀಡುವುದು) | ಜಲ ಸಂಪನ್ಮೂಲ ಇಲಾಖೆ (ಭಾರಿ ಮತ್ತು ಮಧ್ಯಮ ನೀರಾವರಿ)ಗೆ 2023-24ನೇ ಸಾಲಿನ ಆಯವ್ಯಯದಲ್ಲಿ ವಿವಿಧ ಲೆಕ್ಕಶೀರ್ಷಿಕೆಗಳಡಿಯಲ್ಲಿ ನಿಗಮ/ವಲಯಗಳಿಗೆ ಒಟ್ಟಾರೆ ರೂ.16,735.49 ಕೋಟಿ ಅನುದಾನ ಹಂಚಿಕೆ ಮಾಡಲಾಗಿದೆ.<br>ಜಲ ಸಂಪನ್ಮೂಲ ಇಲಾಖೆಯಡಿಯಲ್ಲಿನ ನಾಲ್ಕು ನಿಗಮಗಳಿಗೆ (ಕೃಷ್ಣಾ ಭಾಗ್ಯ ಜಲ ನಿಗಮ, ಕರ್ನಾಟಕ ನೀರಾವರಿ ನಿಗಮ, ವಿಶ್ವೇಶ್ವರಯ್ಯ ಜಲ ನಿಗಮ ಹಾಗೂ ಕಾವೇರಿ ನೀರಾವರಿ ನಿಗಮ) ಲೆಕ್ಕಶೀರ್ಷಿಕೆವಾರು ಹಂಚಿಕೆಯಾದ ಅನುದಾನದಲ್ಲಿ ಆಯಾ ಲೆಕ್ಕಶೀರ್ಷಿಕೆಗಳಡಿ ನಿರ್ದಿಷ್ಟಪಡಿಸಲಾದ ಕಾಮಗಾರಿಗಳಿಗೆ ಬಳಸಲಾಗುತ್ತಿದ್ದು, ಮುಂದುವರೆದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಆದ್ಯತೆ ನೀಡಲಾಗುತ್ತಿದೆ.<br>ಆಯವ್ಯಯದಲ್ಲಿ ಹಂಚಿಕೆಯಾಗಿರುವ ಅನುದಾನದ ಮಿತಿಯಲ್ಲಿ ಕಾರ್ಯಕ್ರಮ ರೂಪಿಸಿಕೊಂಡು ಆದ್ಯತೆ ಮೇಲೆ ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುತ್ತಿದೆ. |
| ಆ) | ಈ ಕಾಮಗಾರಿಗಳಲ್ಲಿ ಎಷ್ಟು ಕಾಮಗಾರಿಗಳು ಪ್ರಾರಂಭವಾಗಿವೇ ಮತ್ತು ಅವು ಯಾವ ಹಂತದಲ್ಲಿವೇ; ಈ ಕಾಮಗಾರಿಗಳು ಯಾವ ಕಾಲಮಿತಿಯೊಳಗೆ ಪೂರ್ಣಗೊಳ್ಳಲಿದೆ? | |

ಸಂಖ್ಯೆ: ಜಸಂಇ 134 ಎಂಎಲ್ಎ 2023

(ಡಿ.ಕೆ.ಶಿವಕುಮಾರ್)
ಉಪ ಮುಖ್ಯ ಮಂತ್ರಿಗಳು